ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಕ್ರೈಂ ಸ್ಟೋರಿ, ಕ್ರೈಂ ಡೈರಿ ಧಾರಾವಾಹಿಗಳ ಪ್ರಸಾರವನ್ನು ನಿಷೇಧಿಸುವಂತೆ ಕೆಲವು ಸಂಘಟನೆಗಳು ಸರ್ಕಾರಕ್ಕೆ ಮನವಿ ಸಲ್ಲಿಸಿವೆ. ಅಲ್ಲದೆ, ಮಾಧ್ಯಮಗಳ ಅಭಿಪ್ರಾಯ ಅಂಕಣಗಳಲ್ಲೂ ಈ ಕುರಿತು ಪ್ರತಿಕ್ರಿಯೆ ವ್ಯಕ್ತಪಡಿಸಿವೆ.

ಆ) ವಿದ್ಯುನ್ಮಾನ ಮಾಧ್ಯಮದಲ್ಲಿ ಪ್ರಸಾರವಾಗುವ ಯಾವುದೇ ಕಾರ್ಯಕ್ರಮವನ್ನು ನಿಷೇಧಿಸುವ ಹಕ್ಕು ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಬರುವುದಿಲ್ಲ.

...

323 (398) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಡತನ ರೇಖೆಗಿಂತ ಕೆಳಗೆ ಇರುವವರಿಗೆ ಹಳದಿ ಪಡಿತರ ಚೀಟಿಯನ್ನು ವಿತರಿಸುವ ವ್ಯವಸ್ಥೆಯಲ್ಲಿ ತಾರತಮ್ಯ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗ್ರಾಮಾಂತರ ಪ್ರದೇಶಗಳಲ್ಲಿ ಈ ವ್ಯವಸ್ಥೆಯು ಅಸಮರ್ಪಕವಾಗಿರುವುದರಿಂದ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಇನ್ನೊಮ್ಮೆ ಸಮೀಕ್ಷೆ ನಡೆಸಿ, ಈ ವ್ಯವಸ್ಥೆಯ ಲೋಪದೋಷಗಳನ್ನು ಸರಿಪಡಿಸುವುದರೊಂದಿಗೆ ಅರ್ಹ ಫಲಾನುಭವಿಗಳಿಗೆ ಹಳದಿ ಪಡಿತರ ಚೀಟಿ ವಿತರಿಸುವ ಬಗ್ಗೆ ಸರ್ಕಾರ ಯೋಚಿಸುವುದೇ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಹೌದು.

ಆ) ಬಂದಿದೆ.

ಇ) ಅನರ್ಹರನ್ನು ಗುರುತಿಸಿ ಅವರ ಕಾರ್ಡುಗಳನ್ನು ರದ್ದುಪಡಿಸಲಾಗುವುದು ಹಾಗೂ ಯಾವುದೇ ಕಾರ್ಡುಗಳು ಇಲ್ಲದವರು ಅರ್ಜಿಯನ್ನು ಸಲ್ಲಿಸಿದಲ್ಲಿ ಅಂತಹವರು ಬಿ.ಪಿ.ಎಲ್. ಕಾರ್ಡ್ ಹೊಂದಲು ಅರ್ಹರಿದ್ದಲ್ಲಿ ಅವರಿಗೆ ಬಿ.ಪಿ.ಎಲ್. ಕಾರ್ಡ್ ನೀಡಲಾಗುವುದು. ಇದು ನಿರಂತರ ಪ್ರಕ್ರಿಯೆಯಾಗಿರುತ್ತದೆ.

...

324 (401) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ರಹ್ಮಾವರ ಕ್ಷೇತ್ರದ ಅರಣ್ಯ ಪ್ರದೇಶಗಳಲ್ಲಿ ನಡೆಯುತ್ತಿರುವುದು ಶ್ರೀಗಂಧ ಕಳ್ಳಸಾಗಾಣಿಕೆಯ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; (ವಿವರಗಳನ್ನು ನೀಡುವುದು)

ಆ) ಈ ಜಾಲವು ವ್ಯಾಪಕವಾಗಿ ಹರಡಿರುವ ಬಗ್ಗೆ ಸಂದೇಹವಿರುವುದರಿಂದ ಇದರ ಬಗ್ಗೆ ಕೂಲಂಕಷ ತನಿಖೆ ನಡೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?